ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

7

ಇಲಾಖೆ / ವಿಷಯ : DEPARTMENT / SUBJECT: Chief Minister

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 28/8/2010

# ಬಿಎಸ್‌ವೈ ವಿರುದ್ಧದ ಸಮನ್ಸ್‌ಗೆ ತಡೆ

■ **ವಿಕ ಸುದ್ದಿಲೋಕ** ಬೆಂಗಳೂರು 28/8



ಗೋಕಾಕ್ ಉಪ ಚುನಾವಣೆ ವೇಳೆ ನೀತಿ ಸಂಹಿತೆ ಉಲ್ಲಂಘಿಸಿ ಚುನಾವಣಾ ಪ್ರಚಾರ ನಡೆಸಿದ ಆರೋಪ ಪ್ರಕರಣದಲ್ಲಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ವಿರುದ್ಧ ಹೊರಡಿಸಿದ್ದ ಸಮನ್ಸ್‌ಗೆ ಹೈಕೋರ್ಟ್ ಗುರುವಾರ ಮಧ್ಯಂತರ ತಡೆ ನೀಡಿದೆ.

ಪ್ರಕರಣ ಹಾಗೂ ಸಮನ್ಸ್ ರದ್ದು ಕೋರಿ ಬಿ.ಎಸ್. ಯಡಿಯೂರಪ್ಪ ಸಲ್ಲಿಸಿದ್ದ ಅರ್ಜಿಯನ್ನು ಧಾರವಾಡ ಪೀಠದಲ್ಲಿ ನ್ಯಾಯಮೂರ್ತಿ ಸೂರಜ್ ಗೋವಿಂದ ರಾಜ್ ಅವರಿದ್ದ ಏಕಸದಸ್ಯಪೀಠ ವಿಚಾರಣೆ ನಡೆಸಿತು.

ವಾದ ಮತ್ತು ಪ್ರತಿವಾದ ಆಲಿಸಿ ವಿಚಾರಣೆ ಪೂರ್ಣಗೊಳಿಸಿದ ನ್ಯಾಯಪೀಠ ಅಂತಿಮ ತೀರ್ಪು ಕಾಯ್ದಿರಿಸಿತು.

ಅಲ್ಲದೆ, ಗೋಕಾಕ್ ನ್ಯಾಯಾಲಯ ಹೊರಡಿಸಿದ್ದ ಸಮನ್ಸ್‌ಗೂ ತಡೆಯಾಜ್ಞೆ ನೀಡಿತು. ಯಡಿಯೂರಪ್ಪ ಪರ ವಾದ ಮಂಡಿಸಿದ ಹಿರಿಯ ನ್ಯಾಯವಾದಿ ಸಿ.ವಿ.ನಾಗೇಶ್, ಪ್ರಕರಣದ ತನಿಖೆ ನಡೆಸಿದ್ದ ಪೊಲೀಸರು ವಿಚಾರಣಾ ನ್ಯಾಯಾಲಯಕ್ಕೆ 'ಬಿ' ರಿಪೋರ್ಟ್ ಸಲ್ಲಿಸಿದ್ದರು. ಆದರೆ, 'ಬಿ' ರಿಪೋರ್ಟ್ ತಿರಸ್ಕರಿಸಿರುವ ನ್ಯಾಯಾಲಯ, ಸಂಜ್ಞೇಯ ಅಪರಾಧ ಎಂದು ಪರಿಗಣಿಸಿ ಸಮನ್ಸ್ ಜಾರಿ ಮಾಡಿದೆ ಎಂದರು.

ತನಿಖಾಧಿಕಾರಿಗಳು ಸಲ್ಲಿಸಿರುವ 'ಬಿ' ರಿಪೋರ್ಟ್ ತಿರಸ್ಕರಿಸುವಂತಿದ್ದರೆ ನ್ಯಾಯಾಲಯ ದೂರುದಾರರ ಹೇಳಿಕೆ ಪಡೆದುಕೊಂಡು, ಯಾವ ಕಾರಣಕ್ಕೆ 'ಬಿ' ವರದಿ ತಿರಸ್ಕರಿಸಲಾಗುತ್ತಿದೆ ಎಂಬುದನ್ನು ದಾಖಲಿಸಬೇಕು. ಆದರೆ, ಈ ಪ್ರಕರಣದಲ್ಲಿ ಈ ಪ್ರಕ್ರಿಯೆ ಅನುಸರಿಸಿಲ್ಲ, ಆದ್ದರಿಂದ, ಪ್ರಕರಣ ಹಾಗೂ ವಿಚಾರಣಾ ನ್ಯಾಯಾಲಯ ಜಾರಿ ಮಾಡಿರುವ ಸಮನ್ಸ್ ರದ್ದುಪಡಿಸಬೇಕೆಂದು ಕೋರಿದರು.